# ಪ್ರತಿಯೊಬ್ಬರು ಪರಿಸರವನ್ನು ಬೆಳೆಸಬೇಕು : ಗುರುರಾಜು



ಹಾಸನ: ಮುಂದಿನ ಪೀಳಿಗೆ ಆರೋಗ್ಯವಾಗಿರಲು ಪರಿಸರ ಅತ್ಯವಶ್ಯಕವಾಗಿದ್ದು, ಪರಿಸರವನ್ನು ರಕ್ಷಣೆ ಮಾಡುವುದರ ಜೊತೆಗೆ ಪ್ರತಿಯೊಬ್ಬರು ಪರಿಸರವನ್ನು ಬೆಳೆಸಬೇಕಾಗಿದೆ ಎಂದು ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಕೆ. ಗುರುರಾಜು ಹೇಳಿದರು.

ನಗರದ ಎಂ.ಜಿ. ರಸ್ತೆಯಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕ ಹಾಗೂ ಇನೋವೇಟಿವ್ ಇಕೋ ಕ್ಲಬ್ ವತಿಯಿಂದ ಸೋಮವಾರ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಜಾಥ ಹಾಗೂ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭೂ ಮಂಡಲದೊಳಗೆ ಜೀವಿಸುವ ಪ್ರತಿಯೊಂದು ಜೀವಿಗೂ ಪರಿ ಸರದ ಅವಶ್ಯಕತೆ ಇದ್ದು, ಪರಿಸ ರವನ್ನು ಅತ್ಯಂತ ಕಾಳಜಿಯಿಂದ ನೋಡಿಕೊಳ್ಳಬೇಕಿದೆ. ವಿವಿಧ ಉದ್ದೇಶಕ್ಕಾಗಿ ನಾವು ಇಂದು ಪರಿಸರದ ವ್ಯಾಪ್ತಿಯನ್ನು ಕಡಿಮೆ ಮಾಡುತ್ತಿದ್ದೇವೆ, ಆದರೇ ಪರಿಸರ ಒಮ್ಮೆ ಮುನಿಸಿಕೊಂಡರೆ ನಾವು ಗಳು ಇಲ್ಲವಾಗುತ್ತೇವೆ. ಹಾಗಾಗಿ ನಮ್ಮ ಉತ್ತಮ ಆರೋಗ್ಯಕ್ಕಾಗಿ ಹಾಗೂ ನಮ್ಮ ಮುಂದಿನ ಪೀಳಿ ಗಾಗಿ ಪರಿಸರವನ್ನು ಸಂರಕ್ಷಿಸಿ ಉಳಿಸಬೇಕಾ ಗಿದೆ ಎಂದರು. ಕಾರ್ಯಕ್ರಮದ ಅಂಗವಾಗಿ ಕಾಲೇಜಿನ ಆವರಣದಲ್ಲಿ ವಿವಿಧ ಜಾತಿಯ ಸಸಿಗಳನ್ನು ನಡೆಲಾ ಯಿತು ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕ ಹಾಗೂ ಇನೋವೇಟಿವ್ ಇಕೋ ಕ್ಲಬ್‌ನ ಸ್ವಯಂ ಸೇವಕಿಯರು ಪರಿಸರ ಜಾಗೃತಿ ಮೂಡಿಸಿದರು.

# ಮಹಾಜನ ಕಾಲೇಜಿನಲ್ಲಿ ವಿಶ್ವ ಪರಿಸರ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಮೈಸೂರು

ನಗರದ ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಭೂಗೋಳಶಾಸ್ತ್ರ ವಿಭಾಗದ ವತಿಯಿಂದ ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ಕಾಲೇಜಿನ ಪ್ರಾಂಶುಪಾಲೆ ಡಾ.ಬಿ.ಆರ್. ಜಯಕುಮಾರಿ ಅವರು ಸಸಿಗಳನ್ನು ನೆಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿ, ಪರಿಸರ ಸಂರಕ್ಷಣೆ ಮತ್ತು ಸದ್ಬಳಕೆ ಕುರಿತು ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂದರು. ಎನ್ನೆಸ್ಸೆಸ್ ಘಟಕದ ಕಾರ್ಯಕ್ರಮಾಧಿಕಾರಿಗಳಾದ ಡಾ.ಜಿ. ದೊಡ್ಡರಸಯ್ಯ, ಸಿ.ಎಸ್. ಸಿದ್ದರಾಜು, ಭೂಗೋಳಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಕೆ.ಕೆ. ಸೋಮಶೇಖರ ಇದ್ದರು.




ಕನ್ನಡಪ್ರಭ Wed, 07 June 2023
https://kpepaper.asianetnews.com/c/72618159




On **Dated :-05-06-2023** World Environment day Programme Organized NSS Units in all Colleges.

ತಮ್ಮ ನಂಬುಗೆಯ

ರಾ.ಸೇ.ಯೋ. ಕಾರ್ಯಕ್ರಮ ಸಂಯೋಜನಾಧಿಕಾರಿ

Programme Co-ordinator
National Service Scheme
NSS Bhavan
Sahukar Chennaiah Road
Opp. Saraswathipuram Police Station
Saraswathipuram, Mysuru-09